## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 645/2023

**ಸಾಕ್ಷಿಯನ್ನು ದಿಃ 08.06.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ವೆಂಕಟೇಶ್ | ಸಿಡಬ್ಲ್ಯೂಃ 12 | ಪಿಡಬ್ಲ್ಯೂಃ 9 |
| ತಂದೆಯ ಹೆಸರು | ಚಲ್ಲಪಿಚ್ಚಯ್ಯ | | |
| ವಯಸ್ಸು | 45 ವರ್ಷ | | |
| ಕೆಲಸ | ಗಾರೆ ಕೆಲಸ | | |
| ವಾಸಸ್ಥಳ | ವಿನೋಬ ಕಾಲೋನಿ | | |

### ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಸಾಕ್ಷಿ ನಿಪಿ-10 ರ ಸ್ಥಳ ಮಹಜರಿನಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-10(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದೆರಡು ವರ್ಷಗಳ ಹಿಂದೆ ನ್ಯಾಯಾಲಯದ ಹತ್ತಿರ ಹಾಕಿದ್ದೇನೆ. ಆಗ ಸಮಯ ಸಂಜೆ 4 ಗಂಟೆಯಾಗಿತ್ತು. ನಾನು ನ್ಯಾಯಾಲಯಕ್ಕೆ ಬಂದಿದು ವಾಪಸ್ಸು ಹೋಗುತ್ತಿದ್ದಾಗ ಪೋಲಿಸರ ಕೋರಿಕೆಯ ಮೇರೆಗೆ ಸಹಿ ಹಾಕಿದ್ದೇನೆ. ನನ್ನ ಜೊತೆ ನಿಪಿ-10ಕ್ಕೆ ಬೇರೆ ಯಾರುಸಹಿ ಮಾಡಿದರು ಎಂದು ಗೊತ್ತಿಲ್ಲ. ನಿಪಿ-10 ರಲ್ಲಿ ಏನು ಬರವಣಿಗೆ ಆಗಿದೆ ಎಂದರೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

### ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ದಿಃ 08.09.2023 ರಂದು ಪೋಲಿಸರು ನ್ಯಾಯಾಲಯದ ಮುಂಭಾಗ ಅದರ ಹಿಂದಿನ ದಿನ ಅಪಘಾತಕ್ಕೆ ಸಂಬಂಧಿಸಿದಂತೆ ಮಹಜರು ಮಾಡಲು ಬಂದಾಗ ಚಾಸಾ-4 ರವರು ಹಾಜರಿದ್ದು, ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-13 ರವರ ಸಮಕ್ಷಮ ಪೋಲಿಸರು ಮಹಜರು ಕ್ರಮವನ್ನು ಬೆಳಿಗ್ಗೆ 10 ರಿಂದ 11-30ರವರೆಗೆ ಜರುಗಿಸಿದರು ಎಂದರೆ ಸರಿಯಲ್ಲ. ನಾನು ಆ ಸಮಯದಲ್ಲಿ ಹಾಜರಿದ್ದು ಸಹಿ ಹಾಕಿದ್ದೇನೆ ಎಂದರೆ

ಸರಿಯಲ್ಲ. ನನಗೆ ಎಲ್ಲಾ ವಿಷಯ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀಮತಿ.ASM ವಕೀಲರಿಂದಃ**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.